# ಕರ್ನಾಟಕ ಸರ್ಕಾರ
## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ನೇವಿ-1/ದ್ವಿದಸ/345/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:೩೧.೧೨.೨೦೨೩.

## ಅಧಿಕೃತ ಜ್ಞಾಪನ

ವಿಷಯ: ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಕಲ್ಯಾಣ-ಕರ್ನಾಟಕ ವೃಂದದ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಪ್ರಥಮ ವೇತನ ಬಿಡುಗಡೆ ಮಾಡಲು ಅನುಮತಿ ನೀಡುವ ಕುರಿತು.

ಉಲ್ಲೇಖ:
1) ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಜಿಎಡಿ/37/ಎಸ್‌ಆರ್‌ಆರ್/74, ದಿನಾಂಕ:05.08.1974.
2) ಈ ಕಛೇರಿಯ ಸಮಸಂಖ್ಯೆ ಆದೇಶ ದಿನಾಂಕ:07.10.2023.
3) ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೂಡ್ಲಿಗಿ ಇವರ ಪತ್ರ ಸಂಖ್ಯೆ:ಎಸ್‌ವಿವಿಟಿಸಪ್ರದಕಾಕೂ/ಸಿ-3/ದ್ವಿದಸಕವ/39/2023-24, ದಿನಾಂಕ:26.10.2023.
4) ಜಂಟಿ ನಿರ್ದೇಶಕರು, ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ, ಕಲಬುರಗಿ ಇವರ ಪತ್ರ ಸಂಖ್ಯೆ:ಕಾಶಿಇ/ಪ್ರಾಕಕ/127/ಸಿಬ್ಬಂದಿ/01/2023-24/2391, ದಿನಾಂಕ:27.11.2023.

*****

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಕಲ್ಯಾಣ-ಕರ್ನಾಟಕ ವೃಂದದ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಉಲ್ಲೇಖ-(2) ರ ಈ ಕಛೇರಿಯ ಆದೇಶದಲ್ಲಿ ಸ್ಥಳ ನಿಯುಕ್ತಿ ಆದೇಶಗಳನ್ನು ಹೊರಡಿಸಲಾಗಿದ್ದು, ಅದರನ್ವಯ ಸದರಿಯವರುಗಳು ಸಂಬಂಧಪಟ್ಟ ಕಛೇರಿ/ಕಾಲೇಜುಗಳಲ್ಲಿ ಕರ್ತವ್ಯಕ್ಕೆ ಹಾಜರಾಗಿರುವುದಾಗಿ ಉಲ್ಲೇಖ-(3) ಹಾಗೂ (4) ರ ಪ್ರಾದೇಶಿಕ ಜಂಟಿ ನಿರ್ದೇಶಕರ/ಪ್ರಾಂಶುಪಾಲರ ಪತ್ರಗಳಲ್ಲಿ ವರದಿಯನ್ನು ಸಲ್ಲಿಸಿ, ಪ್ರಥಮ ವೇತನ ಬಿಡುಗಡೆ ಮಾಡಲು ಅನುಮತಿಯನ್ನು ನೀಡುವಂತೆ ಕೋರಿರುತ್ತಾರೆ. ಆದ್ದರಿಂದ ಉಲ್ಲೇಖ-(1) ರ ಸರ್ಕಾರದ ಅಧಿಕೃತ ಜ್ಞಾಪನದನ್ವಯ ಈ ಕೆಳಕಂಡ ದ್ವಿತೀಯ ದರ್ಜೆ ಸಹಾಯಕರಿಗೆ ಪ್ರಥಮ ವೇತನವನ್ನು ಬಿಡುಗಡೆ ಮಾಡಲು ಅನುಮತಿ ನೀಡಲಾಗಿದೆ.

| ಕ್ರ. ಸಂ | ಕೆ.ಪಿ.ಎಸ್.ಸಿ ಕ್ರ. ಸಂ | ಹೆಸರು (ಶ್ರೀ/ಶ್ರೀಮತಿ) | ಕರ್ತವ್ಯಕ್ಕೆ ಹಾಜರಾದ ಕಛೇರಿ/ಕಾಲೇಜಿನ ಹೆಸರು ಮತ್ತು ಸ್ಥಳ | ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕ |
|---|---|---|---|---|
| 1 | 17 | ಜನಾಬಾಯಿ | ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ, ಕಲಬುರಗಿ | 23.11.2023 |
| 2 | 18 | ಮೀನಾಕ್ಷಿ ಉಜ್ಜಿನಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೂಡ್ಲಿಗಿ, ವಿಜಯನಗರ ಜಿಲ್ಲೆ. | 18.10.2023 |

ಮುಖ್ಯ ಆಡಳಿತಾಧಿಕಾರಿ
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ:**
1) ಮೇಲ್ಕಂಡ ಪ್ರಾದೇಶಿಕ ಜಂಟಿ ನಿರ್ದೇಶಕರು/ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಸಂಬಂಧಪಟ್ಟ ದ್ವಿತೀಯ ದರ್ಜೆ ಸಹಾಯಕರುಗಳಿಗೆ (ಪ್ರಾಂಶುಪಾಲರ ಮುಖಾಂತರ)-ಮಾಹಿತಿಗಾಗಿ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4) ಕಛೇರಿ ಪ್ರತಿ.